ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಬುಧವಾರ, ದಿನಾಂಕ: 09ನೇ ಡಿಸೆಂಬರ್, 2020

ಕೊಡಗು ಜಿಲ್ಲೆಯ ಮುಜರಾಯಿ ದೇವಸ್ಥಾನಗಳಿಗೆ ಅನುದಾನ ನೀಡುವ ಕುರಿತು

ಶ್ರೀಮತಿ ಎಸ್.ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು):-

243 (294) ಮಾನ್ಯ ಮುಜರಾಯಿ ಹಾಗೂ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೊಡಗು ಜಿಲ್ಲೆಯಲ್ಲಿ ಮುಜರಾಯಿ ವ್ಯಾಪ್ತಿಗೆ ಒಳಪಡುವ ದೇವಸ್ಥಾನಗಳು ಯಾವುವು;

(ಆ) ಜಿಲ್ಲೆಯಲ್ಲಿ, ಕಳೆದ ಮೂರು ವರ್ಷಗಳಲ್ಲಿ ಸತತವಾಗಿ ಸಂಭವಿಸಿದ ಪ್ರಕೃತಿ ವಿಕೋಪದಿಂದಾಗಿ ಸದರಿ ದೇವಸ್ಥಾನಗಳಲ್ಲಿ ಹಾಳಾಗಿರುವ ಮೂಲ ಸೌಕರ್ಯಗಳನ್ನು ಪುನರ್‌ಕಲ್ಪಿಸಲು ಮಂಜೂರು ಮಾಡಲಾದ ಅನುದಾನ ಎಷ್ಟು;

(ಇ) ಮೂಲ ಸೌಕರ್ಯಗಳನ್ನು ಕಲ್ಪಿಸುವ ಸಲುವಾಗಿ ಇದುವರೆಗೂ ಅನುದಾನ ದೊರೆಯದ ದೇವಸ್ಥಾನಗಳಿಗೆ, ಪ್ರಸಕ್ತ ಆರ್ಥಿಕ ವರ್ಷದಲ್ಲಿಯಾದರೂ ವಿಶೇಷ ಅನುದಾನವನ್ನು ನೀಡಲಾಗುವುದೇ?